ಈ) ಜಿಲ್ಲೆಗಳಲ್ಲಿ ದೇವಸ್ಥಾನದ ಕೆರೆಗಳು (ಕಲ್ಯಾಣಿ) ನೀರಾವರಿ ಕೆರೆಗಳಲ್ಲದ ಕಾರಣ ಸಣ್ಣ ನೀರಾವರಿ ಇಲಾಖೆಯಿಂದ ಕ್ರಮ ಕೈಗೊಳ್ಳಲು ಸಾಧ್ಯವಿರುವುದಿಲ್ಲ.

ಉ) ರಾಜ್ಯದಲ್ಲಿ ಕೆರೆಗಳ ಅಭಿವೃದ್ಧಿಯನ್ನು ಕೆಳಕಂಡ ಯೋಜನೆಗಳಡಿಯಲ್ಲಿ ಕೈಗೆತ್ತಿಕೊಳ್ಳಲಾಗುತ್ತಿದೆ.

1. ಕೆರೆ ಕಲ್ಯಾಣ ಯೋಜನೆ
2. ಕೆರೆಗಳ ಆಧುನೀಕರಣ ಯೋಜನೆ
3. ರೈತರ ಪಾಲ್ಗೊಳ್ಳುವಿಕೆಯಿಂದ ಕೆರೆಗಳಲ್ಲಿ ಹೂಳೆತ್ತುವ ಕಾರ್ಯಕ್ರಮ
4. ವಿಶ್ವಬ್ಯಾಂಕ್ ನೆರವಿನ ಯೋಜನೆ

ಪಡಿತರ ಚೀಟಿಯ ವ್ಯವಸ್ಥೆಯಲ್ಲಿ ಬದಲಾವಣೆ

4462 - ಶ್ರೀ ಜಯಪ್ರಕಾಶ್ ಹೆಗಡೆ ಕೆ. (ಬ್ರಹ್ಮವರ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. *ಪಡಿತರ ಚೀಟಿ ವ್ಯವಸ್ಥೆಯನ್ನು ನಾಡ ಕಛೇರಿಯಿಂದ ತೆಗೆದು ತಹಸೀಲ್ದಾರರಿಗೆ ನೀಡಿರುವುದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*
2. *ಹಾಗಿದ್ದಲ್ಲಿ ಪುನಃ ನಾಡ ಕಛೇರಿಗೆ ನೀಡುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು?*

ಶ್ರೀ ಡಿ.ಬಿ. ಇನಾಂದಾರ್ (ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು) :

1. ಈ ಕಾರ್ಯವನ್ನು ಇಲ್ಲಿಯವರೆಗೆ ತಾಲ್ಲೂಕು ಕಛೇರಿಯಿಂದಲೇ ನಿರ್ವಹಿಸಲಾಗುತ್ತಿದೆ.
2. ಉದ್ಭವಿಸುವುದಿಲ್ಲ.

ಆಲಮಟ್ಟಿ ಜಲವಿದ್ಯುತ್ ಯೋಜನೆ ಒಪ್ಪಂದ

4463 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆಲಮಟ್ಟಿ ಜಲವಿದ್ಯುತ್ ಯೋಜನೆಯನ್ನು ಕೈಗೆತ್ತಿಕೊಳ್ಳಲು ಯಾವ ದೇಶದ ಯಾವ ಕಂಪನಿಯೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ?

ಆ) ಆಲಮಟ್ಟಿ ಜಲವಿದ್ಯುತ್ ಯೋಜನೆಯನ್ನು ಕೈಗೆತ್ತಿಕೊಳ್ಳಲು ಕರ್ನಾಟಕ ವಿದ್ಯುತ್ ನಿಗಮವು ಸಮರ್ಥವಿದ್ದರೂ ಸಹ ಬೇರೆ ಕಂಪನಿಯೊಂದಿಗೆ ಒಪ್ಪಂದಮಾಡಿಕೊಳ್ಳಲು ಕಾರಣವೇನು?